ದಾವಣಗೆರೆ ವಿಶ್ವವಿದ್ಯಾನಿಲಯ
Davangere University

ಡಾ. ಶಿವಶಂಕರ. ಕೆ. ಎಂ.ಬಿ.ಎ., ಪಿಹೆಚ್.ಡಿ
ಕುಲಸಚಿವರ ಕಛೇರಿ (ಪರೀಕ್ಷಾಂಗ),
ದಾವಣಗೆರೆ ವಿಶ್ವವಿದ್ಯಾನಿಲಯ,
ಶಿವಗಂಗೋತ್ರಿ, ದಾವಣಗೆರೆ-577007.
ದೂರವಾಣಿ ಸಂಖ್ಯೆ: 08192-208420/208104.

Dr. Shivashankar. K., M.B.A., Ph.D.,
Office of the Registrar (Evaluation)
Davangere University,
Shivagangothri, Davangere -577007.
Phone No. 08192-208420/208104.

Email ID: examination@davangereuniversity.ac.in

ಸಂಖ್ಯೆ:ದಾವಿ:ಪವಿ:ಆಶಾ:2022-23; /2109/2 ದಿನಾಂಕ:17-08-2022

## ಪರಿಷ್ಕೃತ ಪ್ರಕಟಣೆ

ವಿಷಯ: ಸೆಪ್ಟೆಂಬರ್/ಅಕ್ಟೋಬರ್-2022ರಲ್ಲಿ ನಡೆಯುವ ಸ್ನಾತಕ NEP ಪಠ್ಯಕ್ರಮದ ಬಿ.ಎ. / ಬಿ.ಎಸ್ಸಿ / ಬಿ.ಕಾಂ / ಬಿ.ಬಿ.ಎ / ಬಿ.ಸಿ.ಎ /ಬಿ.ಎಸ್.ಡಬ್ಲ್ಯೂ /ಬಿ.ಬಿ.ಎ. 2ನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ (ರೆಗ್ಯುಲರ್) ಪರೀಕ್ಷಾ ಅರ್ಜಿ/ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:10-08-2022.

*********

ವಿಶ್ವವಿದ್ಯಾನಿಲಯದಿಂದ ಸೆಪ್ಟೆಂಬರ್/ಅಕ್ಟೋಬರ್-2022ರಲ್ಲಿ ನಡೆಸುವ ಸ್ನಾತಕ NEP ಪಠ್ಯಕ್ರಮದ ಪ್ರಾಯೋಗಿಕ/ಲಿಖಿತ ಪರೀಕ್ಷೆಗಳ ವಿವರವಾದ ವೇಳಾಪಟ್ಟಿಯನ್ನು ನಂತರ ಕಳುಹಿಸಲಾಗುವುದು. ಇದಕ್ಕೆ ಪೂರಕವಾದ ಇತರೆ ಮಾಹಿತಿಗಳನ್ನು ಕೆಳಗೆ ನೀಡಲಾಗಿದೆ ಹಾಗೂ ಪರೀಕ್ಷಾ ಶುಲ್ಕವನ್ನು ಡಿಜಿಟಲ್ ಮಾಧ್ಯಮದ ಮೂಲಕ ಸಂದಾಯ ಮಾಡುವುದು ಕಡ್ಡಾಯವಾಗಿದೆ.

ಪರೀಕ್ಷೆ ತೆಗೆದುಕೊಳ್ಳಲು ನಿಯಮಾನುಸಾರ ಅರ್ಹರಾದ ಅಭ್ಯರ್ಥಿಗಳು ತಮ್ಮ ಅರ್ಜಿಯನ್ನು ಮತ್ತು ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರ ಮೂಲಕ ಕುಲಸಚಿವರು (ಪರೀಕ್ಷಾಂಗ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

### ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು

| | | |
|---|---|---|
| ದಂಡಶುಲ್ಕವಿಲ್ಲದೆ | ---------------- | 18-08-2022 ರಿಂದ 27-08-2022 ರವರೆಗೆ |
| ದಂಡಶುಲ್ಕ ರೂ.110 ರಂತೆ ಪ್ರತಿ ಸೆಮಿಸ್ಟರ್‌ಗೆ | ---------------- | 28-08-2022 ರಿಂದ 30-08-2022 ರವರೆಗೆ |
| ದಂಡಶುಲ್ಕ ರೂ.550 ರಂತೆ ಪ್ರತಿ ಸೆಮಿಸ್ಟರ್‌ಗೆ | ---------------- | 31-08-2022 ರಂದು |

### ಶುಲ್ಕದ ವಿವರಗಳು

ಅ. ಬಿ.ಎ / ಬಿ.ಎಸ್ಸಿ / ಬಿ.ಕಾಂ ವಿದ್ಯಾರ್ಥಿಗಳಿಗೆ

| ಕ್ರಸಂ | ವಿವರ | ಪ್ರಸ್ತುತ ಶುಲ್ಕದ ವಿವರ |
|---|---|---|
| 1 | ಪರೀಕ್ಷಾ ಅರ್ಜಿ ಪ್ರಕ್ರಿಯೆ ಶುಲ್ಕ | ರೂ. 100.00 |
| 1 | ಪ್ರತಿ ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ಪರೀಕ್ಷಾ ಶುಲ್ಕ ರೂ. 505.00<br>ಅಂಕಪಟ್ಟಿ ಶುಲ್ಕ ರೂ. 165.00<br>-----<br>ಒಟ್ಟು ಶುಲ್ಕ ರೂ. = 670.00 |

ಆ. ಬಿ.ಬಿ.ಎಂ/ಬಿ.ಸಿ.ಎ/ಬಿ.ಎಸ್.ಡಬ್ಲ್ಯೂ/ಬಿ.ಬಿ.ಎ ವಿದ್ಯಾರ್ಥಿಗಳಿಗೆ

| ಕ್ರಸಂ | ವಿವರ | ಪ್ರಸ್ತುತ ಶುಲ್ಕದ ವಿವರ |
|---|---|---|
| 1 | ಪರೀಕ್ಷಾ ಅರ್ಜಿ ಪ್ರಕ್ರಿಯೆ ಶುಲ್ಕ | ರೂ. 100.00 |
| 1 | ಪ್ರತಿ ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ಪರೀಕ್ಷಾಶುಲ್ಕ ರೂ. 870.00<br>ಅಂಕಪಟ್ಟಿ ಶುಲ್ಕ ರೂ. 165.00<br>------<br>ಒಟ್ಟು ಶುಲ್ಕ ರೂ. 1,035.00 |

### ವಿದ್ಯಾರ್ಥಿಗಳಿಗೆ ಸೂಚನೆ:-

1. ವಿದ್ಯಾರ್ಥಿಗಳು **Online** ಮುಖಾಂತರ ಅರ್ಜಿ ಸಲ್ಲಿಸಲು **https://uucms.karnataka.gov.in/Login/Index** ನಲ್ಲಿ **Student login** ಆಗಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿ ಪರೀಕ್ಷಾ ಅರ್ಜಿಯನ್ನು ಸಲ್ಲಿಸಬೇಕು.
2. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಪಾವತಿ ಮಾಡುವುದಕ್ಕೆ ಮುಂಚಿತವಾಗಿ ಎಲ್ಲಾ ಮಾಹಿತಿಗಳ ನಿಖರತೆಯನ್ನು ಖಾತರಿಪಡಿಸಿಕೊಳ್ಳಬೇಕು.

3. ವಿದ್ಯಾರ್ಥಿಗಳು ಯಾವುದೇ ಪರೀಕ್ಷೆಯನ್ನು ಪ್ರಥಮ ಅವಕಾಶದಲ್ಲಿ ಬರೆಯುತ್ತಿದ್ದರೆ, ಅಂತಹ ಸಂದರ್ಭದಲ್ಲಿ ಎಲ್ಲಾ ವಿಷಯಗಳನ್ನು ಕಡ್ಡಾಯವಾಗಿ ತೆಗೆದುಕೊಳ್ಳುವುದು.
4. ವಿದ್ಯಾರ್ಥಿಗಳು ಯಾವುದೇ ಪರೀಕ್ಷೆಯನ್ನು ಮರು ಅವಕಾಶದಲ್ಲಿ ಬರೆಯುತ್ತಿದ್ದರೆ, ಅಂತಹ ಸಂದರ್ಭದಲ್ಲಿ ವಿಷಯಗಳ ಆಯ್ಕೆಯು ವಿದ್ಯಾರ್ಥಿಗೆ ಇರುವುದಿಲ್ಲ.
5. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸುವುದಕ್ಕೆ ಮುಂಚಿತವಾಗಿ ಪರೀಕ್ಷೆ ಬರೆಯಬೇಕಾದ ವಿಷಯಗಳನ್ನು ಖಚಿತ ಪಡಿಸಿಕೊಳ್ಳುವುದು.
6. ವಿದ್ಯಾರ್ಥಿಗಳಿಗೆ ಪರೀಕ್ಷೆ ಶುಲ್ಕವನ್ನು ಪಾವತಿ ಮಾಡುವ ವಿಧಾನ.
   - ವಿದ್ಯಾರ್ಥಿಯು UUCMS **login** ಮುಖಾಂತರ Payment Gateway ಸೌಲಭ್ಯವನ್ನು ಬಳಸಿಕೊಂಡು (Debit Card / Credit Card / Net Banking / Wallet, ಇತ್ಯಾದಿ) ಹಣ ಪಾವತಿಸಬಹುದು.
7. ವಿದ್ಯಾರ್ಥಿಗಳು ತಮ್ಮ UUCMS **login** ನಿಂದ ಪರೀಕ್ಷಾ ಪ್ರವೇಶ ಪತ್ರಿಕೆಯನ್ನು ಸ್ವತಃ ಪಡೆಯಬಹುದು.
8. ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ ಶೈಕ್ಷಣಿಕ ಅವಧಿ ಮುಗಿಯುವರೆಗೂ ತರಗತಿಗಳಿಗೆ ಹಾಜರಾಗಿ ನಿಯಮಾನುಸಾರ ಹಾಜರಾತಿ ಗಳಿಸುವುದು ಕಡ್ಡಾಯವಾಗಿರುತ್ತದೆ. ಇಲ್ಲವಾದಲ್ಲಿ ಪರೀಕ್ಷೆ ಬರೆಯಲು ಅನರ್ಹರು.

**ವಿಶೇಷ ಸೂಚನೆ: ವಿದ್ಯಾರ್ಥಿಗಳು Internet Browsing centerನ ಮಾಲೀಕರ ಬ್ಯಾಂಕ್ ಖಾತೆಯ ಮೂಲಕ ವಿಶ್ವವಿದ್ಯಾನಿಲಯಕ್ಕೆ ಹಣ ಪಾವತಿಸುವ ಸಂದರ್ಭದಲ್ಲಿ ಉಂಟಾಗುವ ತಾಂತ್ರಿಕ ತೊಂದರೆಗಳಿಗೆ ವಿದ್ಯಾರ್ಥಿಗಳೇ ಜವಾಬ್ದಾರರು ಹಾಗೂ ಎರಡು ಬಾರಿ ಶುಲ್ಕ ಪಾವತಿಸಿದ್ದಲ್ಲಿ ಮಾರುಪಾವತಿಗೆ(No Refund) ಅವಕಾಶ ಇರುವುದಿಲ್ಲ.**

9. **ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಕೂಡ ನಿಗದಿತ ಸಮಯದಲ್ಲಿ ಪರೀಕ್ಷಾ ಶುಲ್ಕ ಪಾವತಿಸಬೇಕು**

## ಪ್ರಾಚಾರ್ಯರಿಗೆ ಸೂಚನೆ:-

10. ಕಾಲೇಜಿನ ಪ್ರಾಂಶುಪಾಲರು ಪರೀಕ್ಷೆಗೆ ಸಂಬಂಧಪಟ್ಟ ಎಲ್ಲಾ ಕಾರ್ಯಗಳನ್ನು UUCMS ನ **College login** ಮುಖಾಂತರ ಮಾಡಬೇಕು.
11. ಕಾಲೇಜಿನ ಪ್ರಾಂಶುಪಾಲರು ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಕಟ್ಟುವುದಕ್ಕಿಂತ ಮುಂಚಿತವಾಗಿ ಶೈಕ್ಷಣಿಕವಾಗಿ ಅರ್ಹತೆಗಳು ಹೊಂದಿದ್ದಾರೆ ಎಂದು ಖಚಿತ ಪಡಿಸಿಕೊಳ್ಳಬೇಕು.
12. ಕಾಲೇಜಿನ ಪ್ರಾಂಶುಪಾಲರು UUCMS ನ **login** ಮುಖಾಂತರ ವಿದ್ಯಾರ್ಥಿಗಳ ಪರೀಕ್ಷೆ ಅರ್ಹತೆಯನ್ನು ದೃಢೀಕರಿಸಬೇಕು.
13. ಕಾಲೇಜು ದೃಢೀಕರಿಸಿದ ಮಾಹಿತಿಗಳನ್ನು ವಿದ್ಯಾರ್ಥಿಗಳಿಗೆ UUCMS ನ **login** ಮುಖಾಂತರ ತಿಳಿಸಲಾಗುವುದು.
14. ಅವಶ್ಯವಿದ್ದ ಸಂದರ್ಭದಲ್ಲಿಮಾತ್ರ ವಿದ್ಯಾರ್ಥಿಗಳ ಪರೀಕ್ಷಾ ಪ್ರವೇಶ ಪತ್ರವನ್ನು ವಿಶ್ವವಿದ್ಯಾನಿಲಯದ ನಿರ್ದೇಶಾನುಸಾರ ಕಾಲೇಜುಗಳಲ್ಲಿ ಮುದ್ರಿಸಿ ಒದಗಿಸತಕ್ಕದ್ದು.
15. ವಿಶ್ವವಿದ್ಯಾನಿಲಯವು ಕಾಲೇಜುಗಳಿಗೆ ಒದಗಿಸುವ ಪ್ರಶ್ನೆ ಪತ್ರಿಕೆಗಳ ಸಂಖ್ಯೆಯನ್ನು UUCMS ನ **login** ಮುಖಾಂತರ ತಿಳಿಸುವುದು.ಕಾಲೇಜುಗಳು ಇದನ್ನು ಪರಿಶೀಲಿಸಿ ಯಾವುದಾದರು ವ್ಯತ್ಯಯವಿದ್ದರೆ ಅದನ್ನು ವಿಶ್ವವಿದ್ಯಾನಿಲಯದ ಅಧಿಕಾರಿಗಳ ಗಮನಕ್ಕೆ ತರುವುದು.
16. Invigilator Dairy ಯನ್ನು (02 ಪ್ರತಿಗಳು) ಆನ್‌ಲೈನ್ ಮೂಲಕವೇ ಸಿದ್ದಪಡಿಸಿಕೊಳ್ಳಬೇಕು ಹಾಗೂ ಆಯಾ ದಿನದ ಉತ್ತರ ಪತ್ರಿಕೆ ಬಂಡಲ್ ಗಳ ಜೊತೆಯಲ್ಲಿಯೇ 01 ಪ್ರತಿಯನ್ನು ಕಳುಹಿಸಿಕೊಡುವುದು.
17. ಪರೀಕ್ಷೆಗೆ ಗೈರುಹಾಜರಾದ ವಿದ್ಯಾರ್ಥಿಗಳ ನೊಂದಣಿ ಸಂಖ್ಯೆ ಮತ್ತು ವಿಷಯವನ್ನು (QP Code) ಆನ್ ಲೈನ್ ಮೂಲಕವೇ ನಮೂದಿಸುವುದು.
18. ನಿಯಮಾನುಸಾರ ವಿಶ್ವವಿದ್ಯಾನಿಲಯವು ಅನುಮೋದನೆ ನೀಡಿರುವ ವಿದ್ಯಾರ್ಥಿಗಳಿಂದ ಮಾತ್ರ ಪರೀಕ್ಷಾ ಅರ್ಜಿ ಹಾಗೂ ಶುಲ್ಕ ಸಂಗ್ರಹಿಸಬೇಕು.
19. ಮುದ್ರಿತ ನಮೂನೆಗಳು(ಸೈದ್ಧಾಂತಿಕ/ಪ್ರಾಯೋಗಿಕ) ಹಾಗೂ ಲೇಖನ ಸಾಮಗ್ರಿಗಳ ಬೇಡಿಕೆ ಪಟ್ಟಿಯನ್ನು ಸಹ **ದಿನಾಂಕ:25-08-2022** ರೊಳಗಾಗಿ ವಿಶ್ವವಿದ್ಯಾನಿಲಯಕ್ಕೆ ತಪ್ಪದೇ ಸಲ್ಲಿಸತಕ್ಕದ್ದು.
20. ಪರೀಕ್ಷಾ ಫೀ ಪಾವತಿಸದೇ ಇರುವ ವಿದ್ಯಾರ್ಥಿಗಳನ್ನು ಪರೀಕ್ಷೆ ಬರೆಯಲು ಅನುಮತಿಸಿ ನಂತರದಲ್ಲಿ ಫಲಿತಾಂಶ ಬಾರದ ಬಗ್ಗೆ ದೂರು ನೀಡುವುದನ್ನು ಗಮನಿಸಲಾಗಿದೆ.ಈ ಬಾರಿ ಇಂತಹ ಪ್ರಕರಣಗಳು ಬಾರದಂತೆ ಎಚ್ಚರವಹಿಸಬೇಕು. ಒಮ್ಮೆ ಪರೀಕ್ಷೆ ಬರೆಸಿದಲ್ಲಿ ಅಭ್ಯರ್ಥಿ ಪಟ್ಟಿಯಲ್ಲಿ ಹೆಸರು ಇಲ್ಲದವರ ಫಲಿತಾಂಶ ನೀಡಲು ಅವಕಾಶವಿರದಂತೆ ಸಾಫ್ಟ್‌ವೇರ್‌ನಲ್ಲಿ ಮಾರ್ಪಾಡು ಮಾಡಿಕೊಳ್ಳಲಾಗಿದೆ. ವಿದ್ಯಾರ್ಥಿಗಳಿಗೆ ಇದನ್ನು ತಿಳಿಸುವುದು.
21. ಪ್ರಸ್ತುತ ಸಾಲಿನಲ್ಲಿ ಪ್ರವೇಶ ಪಡೆದು ಶೈಕ್ಷಣಿಕ ವಿಭಾಗದಿಂದ ಅನುಮೋದನೆಗೊಂಡ ವಿದ್ಯಾರ್ಥಿಗಳನ್ನು ಮಾತ್ರ ಪರೀಕ್ಷೆಗೆ ಹಾಜರು ಪಡಿಸುವ ಹೊಣೆಯು ಕಾಲೇಜಿನ ಪ್ರಾಂಶುಪಾಲರದ್ದಾಗಿರುತ್ತದೆ. ತಪ್ಪಿದಲ್ಲಿ ತಮ್ಮನ್ನೆ ನೇರ ಹೊಣೆಗಾರರನ್ನಾಗಿ ಮಾಡಲಾಗುತ್ತದೆ.
22. ಪರೀಕ್ಷೆಗೆ ಗೈರು ಹಾಜರಾದ ವಿದ್ಯಾರ್ಥಿಗಳ ಪಟ್ಟಿಯನ್ನು (Absentee Statement) ಪ್ರತ್ಯೇಕವಾಗಿ ಆಯಾ ದಿನದಂದೇ ವಿಶ್ವವಿದ್ಯಾನಿಲಯಕ್ಕೆ ಕಳುಹಿಸಬೇಕು.

17/8/22

ಕುಲಸಚಿವರು (ಪರೀಕ್ಷಾಂಗ)

**ಕುಲಸಚಿವರು (ಪರೀಕ್ಷಾಂಗ)**
**ದಾವಣಗೆರೆ ವಿಶ್ವವಿದ್ಯಾನಿಲಯ**
**ಶಿವಗಂಗೋತ್ರಿ, ದಾವಣಗೆರೆ - 577007**

ಗೆ,

**ದಾವಣಗೆರೆ ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಬಿ.ಎ/ಬಿ.ಎಸ್ಸಿ/ಬಿ.ಕಾಂ/ಬಿ.ಬಿ.ಎಂ/ಬಿ.ಸಿ.ಎ/ಬಿ.ಎಸ್.ಡಬ್ಲ್ಯೂ/ ಬಿ.ಬಿ.ಎ ಕಾಲೇಜುಗಳ ಪ್ರಾಚಾರ್ಯರುಗಳಿಗೆ.**

**ಪ್ರತಿ:**

1. ಸಮಾಜ ಕಲ್ಯಾಣ ಅಧಿಕಾರಿಗಳು, ಸಮಾಜ ಕಲ್ಯಾಣಾಧಿಕಾರಿಗಳ ಕಛೇರಿ, ದಾವಣಗೆರೆ/ಚಿತ್ರದುರ್ಗ ಜಿಲ್ಲೆ.
2. ಜಿಲ್ಲಾಧಿಕಾರಿಗಳು, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ, ದಾವಣಗೆರೆ/ಚಿತ್ರದುರ್ಗ ಜಿಲ್ಲೆ.
3. ಆಪ್ತಶಾಖೆ, ಮಾನ್ಯ ಕುಲಪತಿಗಳು, ಕುಲಸಚಿವ(ಆಡಳಿತ), ಹಣಕಾಸು ಅಧಿಕಾರಿಗಳು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
4. ಉಪಕುಲಸಚಿವರು (ಪರೀಕ್ಷಾಂಗ), ಉಪಕುಲಸಚಿವರು(ಆಡಳಿತ), ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
5. ಅಧೀಕ್ಷಕರು, ವಿಷಯ ನಿರ್ವಾಹಕರುಗಳು, ಪರೀಕ್ಷಾಂಗ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
6. ಪ್ರಾದೇಶಿಕ ಮುಖ್ಯಸ್ಥರು, ಲಾಜಿಸಿಸ್, ದಾವಣಗೆರೆ.
7. ಕಛೇರಿ ಪ್ರತಿ.